ಬೀದರ್ ಜಿಲ್ಲೆಯಲ್ಲಿ ಜಲಸಂವರ್ಧನೆ ಯೋಜನೆಯಡಿಯಲ್ಲಿ ಕೆರೆಗಳ ಹೂಳೆತ್ತುವುದು.

2406 (2206) ಶ್ರೀ ರಾಜೇಂದ್ರ ವರ್ಮ (ಹುಲ್‌ಸೂರು) :— ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಜಲ ಸಂವರ್ಧನೆ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಕೆರೆಗಳ ಹೂಳೆತ್ತಲಾಗುವುದು; (ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳನ್ನು ಒದಗಿಸುವುದು)

ಆ) ಅದಕ್ಕಾಗಿ ಇಲ್ಲಿಯವರೆವಿಗೆ ಬಿಡುಗಡೆ ಮಾಡಿರುವ ಹಾಗೂ ಖರ್ಚು ಮಾಡಿರುವ ಹಾಗೂ ಪ್ರಸಕ್ತ ಸಾಲಿಗೆ ಮೀಸಲಾಗಿಟ್ಟಿರುವ ಹಣದ ಮೊತ್ತವೆಷ್ಟು ;

ಇ) ಮೇಲ್ಕಂಡ ಯೋಜನೆಯಲ್ಲಿ ಹಲಸೂರು ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಕೆರೆಗಳ ಹೂಳೆತ್ತಲಾಗುವುದು ;

ಈ) ಈ ಯೋಜನೆಗಾಗಿ ವಿಶ್ವ ಬ್ಯಾಂಕಿನಿಂದ ಇಲ್ಲಿಯವರೆಗೆ ಬಂದಿರುವ ನೆರವಿನ ಮೊತ್ತವೆಷ್ಟು; ಬೀದರ್ ಜಿಲ್ಲೆಯ ವಿವಿಧ ಮತಕ್ಷೇತ್ರಕ್ಕೆ ಇಲ್ಲಿಯವರೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು) :—

ಅ) ಇನ್ನೂ ನಿರ್ಧರಿಸಿರುವುದಿಲ್ಲ

ಆ) ಉದ್ಭವಿಸುವುದಿಲ್ಲ

ಇ) ಇನ್ನೂ ನಿರ್ಧರಿಸಿರುವುದಿಲ್ಲ

ಈ) ಇಲ್ಲಿಯವರೆವಿಗೂ ವಿಶ್ವಬ್ಯಾಂಕಿನಿಂದ ಹಣ ಪಡೆದಿರುವುದಿಲ್ಲ.

ನವದೆಹಲಿಯಲ್ಲಿರುವ ಕರ್ನಾಟಕ ಭವನದ ಸಿಬ್ಬಂದಿಯ ಕಾರ್ಯ ವೈಖರಿ.

2407 (೨೪೩೦) ಶ್ರೀ ರಾಜೇಂದ್ರ ವರ್ಮ (ಹುಲ್‌ಸೂರು) :— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

೧. ನವದೆಹಲಿಯ ಕರ್ನಾಟಕ ಭವನದ ವಿವಿಧ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು?

೨. ಈ ಸಿಬ್ಬಂದಿ ವರ್ಗದವರು ಎಷ್ಟು ವರ್ಷಗಳಿಂದ ಕರ್ನಾಟಕ ಭವನದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ?